2 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ನ್ಯಾಯಾಲಯದಲ್ಲಿ,
ಚಿಕ್ಕಮಗಳೂರು

<u>ಸತ್ರ ಮೊಕದ್ದಮೆ ನಂಃ 30/2021</u>

| | | | |
|---|---|---|---|
| ಸಾಕ್ಷಿದಾರರ ಹೆಸರು | - | ನಂದಿನಿ ಶೆಟ್ಟಿ | ಪಿಡಬ್ಲೂ - 08 |
| ಗಂಡನ ಹೆಸರು | - | ಶ್ರೀನಿವಾಸಶೆಟ್ಟಿ | ಸಿಡಬ್ಲೂ - 14 |
| ವಯಸ್ಸು | - | 49 ವರ್ಷ | |
| ಉದ್ಯೋಗ | - | ಪಿ.ಎಸ್.ಐ., ಮಹಿಳಾ ಠಾಣೆ, ಚಿಕ್ಕಮಗಳೂರು | |
| ವಾಸ ಸ್ಥಳ | - | ಚಿಕ್ಕಮಗಳೂರು | |

ದಿನಾಂಕಃ **04.06.2025** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

<u>ಮುಖ್ಯ ವಿಚಾರಣೆ : ಸರ್ಕಾರಿ ಅಭಿಯೋಜಕರಿಂದ-</u>

1. ಜುಲೈ 2018 ರಿಂದ ಆಗಸ್ಟ 2020 ರವರೆಗೆ ನಾನು ಬಸವನಹಳ್ಳಿ ಠಾಣೆಯಲ್ಲಿ ಪಿ.ಎಸ್.ಐ. ಆಗಿ ಕರ್ತವ್ಯ ನಿರ್ವಹಿಸಿದ್ದೇನೆ.
2. ದಿಃ 23.10.2019 ರಂದು ಈ ಪ್ರಕರಣದ ಮುಂದಿನ ತನಿಖೆಯನ್ನು ಚಾಸಾ.13 ರವರಿಂದ ಪಡೆದುಕೊಂಡು ಅಲ್ಲಿಯವರೆಗೆ ಆದ ತನಿಖೆಯನ್ನು ಪರಿಶೀಲಿಸಿರುತ್ತೇನೆ.
3. ಆರೋಪಿತರ ವಿರುದ್ಧ ಸಾಕ್ಷ್ಯಧಾರಗಳಿದ್ದರಿಂದ ಆರೋಪಿತರ ವಿರುದ್ಧ ದೋಷಾರೋಪಣೆ ಪಟ್ಟಿ ಸಲ್ಲಿಸಿದ್ದೇನೆ.

   <u>ಪಾಟೀಸವಾಲು: ಶ್ರೀ ಐ.ಎಸ್.ಟಿ., ವಕೀಲರಿಂದ ಆರೋಪಿತರ ಪರವಾಗಿ</u>

4. ಈ ಪ್ರಕರಣದ ಘಟನಾ ಸ್ಥಳ ವಿಜಯಪುರದ ಮುಖ್ಯ ರಸ್ತೆಯಾಗಿದ್ದು ಅದೊಂದು ಜನ ನಿಬಿಡ ಸ್ಥಳವಾಗಿದ್ದು ವಾಣಿಜ್ಯ ಕಟ್ಟಡವಾಗಿದೆ.
5. ನಾನು ಘಟನಾ ಸ್ಥಳಕ್ಕೆ ಬೇಟಿ ನೀಡಿಲ್ಲ. ಅಲ್ಲಿ ಸಿಸಿ ಟಿವಿ ಫ್ಯೂಟೇಜುಗಳು ಲಭ್ಯವಿದ್ದವೇ ನನಗೆ ಗೊತ್ತಿಲ್ಲ. ಚಾಸಾ.1 ರವರ ವಿರುದ್ಧ ನಮ್ಮ

ಠಾಣೆಯಲ್ಲಿ ಹಾಗೂ ಚಿಕ್ಕಮಗಳೂರಿನ ಇತರೇ ಠಾಣೆಗಳಲ್ಲಿ ಹಲವು ಪ್ರಕರಣಗಳು ದಾಖಲಾಗಿವೆ ಎಂದರೆ ನನಗೆ ಗೊತ್ತಿಲ್ಲ. ನಾನು ಯಾವುದೇ ತನಿಖೆ ನಡೆಸದೆ ಆರೋಪಿತರ ವಿರುದ್ಧ ಸುಳ್ಳು ಆರೋಪಣಾ ಪಟ್ಟಿ ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯ್ತು)

ಓ.ಹೇ.ಕೇ.ಸ.ಇ.ಎ.ಒ.

ಸಹಿ/-

2 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಮಗಳೂರು.

ಸಾಕ್ಷಿಯ ಸಹಿ